# ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಬೆಂಗಳೂರು ನಗರ (DIET)

**2024–25ನೇ ಸಾಲಿನ ಎಸ್. ಎಸ್. ಎಲ್. ಸಿ ಸರಣಿ ಪರೀಕ್ಷೆ – 1**

ವಿಷಯ : ಪ್ರಥಮಭಾಷೆ ಕನ್ನಡ — ವಿಷಯ ಸಂಕೇತ : 01K

ಸಮಯ : 1 ಗಂಟೆ 30 ನಿಮಿಷಗಳು — ಗರಿಷ್ಠ ಅಂಕಗಳು : 50

---

**ವಿದ್ಯಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :**

- ಈ ಪ್ರಶ್ನೆಪತ್ರಿಕೆಯು ವಸ್ತು ನಿಷ್ಠ ಮತ್ತು ವಿಷಯ ನಿಷ್ಠ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿದೆ .
- ವಸ್ತು ನಿಷ್ಠ ಮತ್ತು ವಿಷಯ ನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

---

I. **ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸರಿಯಾದ ಉತ್ತರವನ್ನು ಆರಿಸಿ, ಉತ್ತರದ ಕ್ರಮಾಕ್ಷರದೊಂದಿಗೆ ಬರೆಯಿರಿ :** **3 X 1 = 3**

1. **'ದೇವೇಂದ್ರ' ಪದವು ಈ ಸಂಧಿಗೆ ಉದಾಹರಣೆಯಾಗಿದೆ.**

(ಎ) ಲೋಪ ಸಂಧಿ (ಬಿ) ಆಗಮ ಸಂಧಿ

(ಸಿ) ಗುಣ ಸಂಧಿ ಡಿ) ಆದೇಶ ಸಂಧಿ

**2. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮಾನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಬಳಸುವ ಲೇಖನ ಚಿಹ್ನೆ**

(ಎ) ಉದ್ಧರಣ ಚಿಹ್ನೆ (ಬಿ) ವಾಕ್ಯವೇಷ್ಟನ ಚಿಹ್ನೆ

(ಸಿ) ಆವರಣ ಚಿಹ್ನೆ (ಡಿ) ವಿವರಣಾತ್ಮಕ ಚಿಹ್ನೆ

**3. ಹಳಗನ್ನಡ ಪಂಚಮೀ ವಿಭಕ್ತಿ ಪ್ರತ್ಯಯವಿದು.**

(ಎ) ಇಂದಂ (ಬಿ) ಅನ್ನು

(ಸಿ) ಅತ್ತಣಿಂ (ಡಿ) ಒಳ್

II. **ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** **3X1=3**

4. ಮಾಡೋಣ : ವಿಧ್ಯರ್ಥಕ :: ಮಾಡರು ___________

5. ದ್ರೋಣ : ಅಂಕಿತನಾಮ :: ವಿದ್ಯಾರ್ಥಿ : ____________

6. ಕಟ್ಟಕಡೆಗೆ : ಕಡೆಗೆ ಕಡೆಗೆ : : ಮೊತ್ತಮೊದಲು : __________

III. **ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **4X1=4**

7. ಎಣ್ಣೆ ತುಪ್ಪದ ಮಿಶ್ರಣ ಬೇಡವೆಂದು ಹೇಳಿದವರು ಯಾರು ?

8. ಶಾನುಭೋಗರ 'ಬ್ರಹ್ಮಾಸ್ತ್ರ' ಯಾವುದು?

9. ನದೀಜಲಗಳು ಏನಾಗಿವೆ?

10. ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ?

IV. **ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** **3x2=6**

11. ವ್ಯಾವಹಾರಿಕ ಮತ್ತು ಗ್ರಾಂಥಿಕ ಭಾಷೆಯ ಲಕ್ಷಣಗಳೇನು ?

12. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರು ಏನೆಂದು ಯೋಚಿಸಿದರು?

13. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು?

V. **ಕೆಳಗಿನ ಕವಿಗಳ / ಸಾಹಿತಿಗಳ ಜನ್ಮ ಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ** **2x3=6**

14. ಎ. ಎನ್. ಮೂರ್ತಿರಾವ್
15. ದ. ರಾ. ಬೇಂದ್ರೆ

VI. **ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭಸಹಿತ ಸ್ವಾರಸ್ಯವನ್ನು ಬರೆಯಿರಿ.** **4x3=12**

16. "ಸಿಗುರು ತೆಗೆದ ಕಬ್ಬಿನಂತೆ, ಉಷ್ಣ ಅಳಿದ ಹಾಲಿನಂತೆ'
17. "ನಾನು ಮುಖ ಮೇಲಾಗಿ ಬಿದ್ದಿದ್ದೆನೆ?"
18. "ಹೊಸ ಭರವಸೆಗಳ ಕಟ್ಟೋಣ."
19. "ಸಾರ್ವಭೌಮರಾ ನೆತ್ತಿಯ ಕುಕ್ಕಿ"

VII. **ಕೊಟ್ಟಿರುವ ಪದ್ಯ ಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1x4=4**

20. ನೀಲ ಮೇಘ ಮಂಡಲ

ಹಕ್ಕಿ ಹಾರುತಿದೆ ನೋಡಿದಿರಾ?

**ಅಥವಾ**

ಯುಗ ಯುಗಗಳ

ಹಕ್ಕಿ ಹಾರುತಿದೆ ನೋಡಿದಿರಾ?

VIII. **ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** **1x4=4**

21. ಬಿದ್ದುದನ್ನು ಮೇಲೆಬ್ಬಿಸಿ ನಿಲ್ಲಿಸಿ
ಹೊಸ ಭರವಸೆಗಳ ಕಟ್ಟೋಣ.
ಮನುಜರ ನಡುವಣ ಅಡ್ಡಗೋಡೆಗಳ
ಕೆಡವುತ ಸೇತುವೆಯಾಗೋಣ.

IX. **ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **1X4=4**

22. ಭಾಷೆ ಸತ್ವಪೂರ್ಣವಾಗಿ ವಿಕಾಸಗೊಳ್ಳುವುದು ಯಾವಾಗ ?

**ಅಥವಾ**

ಕನ್ನಡಭಾಷೆ ಸಮೃದ್ಧವಾಗಿ ರೂಪುಗೊಂಡ ಬಗೆ ಹೇಗೆ ? ವಿವರಿಸಿ.

X. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯಕ್ಕೆ ಪ್ರಬಂಧ ಬರೆಯಿರಿ.** **1X4=4**

1. ಗ್ರಂಥಾಲಯಗಳ ಮಹತ್ವ
2. ಸಾಮಾಜಿಕ ಪಿಡುಗುಗಳು.

*************

# ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಬೆಂಗಳೂರು ನಗರ (DIET)

## 2024–25ನೇ ಸಾಲಿನ ಎಸ್. ಎಸ್. ಎಲ್. ಸಿ ಸರಣಿ ಪರೀಕ್ಷೆ – 2

ವಿಷಯ : ಪ್ರಥಮಭಾಷೆ ಕನ್ನಡ — ವಿಷಯ ಸಂಕೇತ : 01K

ಸಮಯ : 1ಗಂ.30 ನಿಮಿಷಗಳು — ಗರಿಷ್ಠ ಅಂಕಗಳು : 50

---

**ವಿದ್ಯಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :**

- ಈ ಪ್ರಶ್ನೆಪತ್ರಿಕೆಯು ವಸ್ತು ನಿಷ್ಠ ಮತ್ತು ವಿಷಯ ನಿಷ್ಠ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿದೆ .
- ವಸ್ತು ನಿಷ್ಠ ಮತ್ತು ವಿಷಯ ನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

---

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಪೂರ್ಣ ಉತ್ತರವನ್ನು ಬರೆಯಿರಿ.** **3*1=3**

**1. ಕಟ್ಟು– ಧಾತುವಿನ ವಿಧ್ಯರ್ಥಕ ರೂಪ.**

ಎ) ಕಟ್ಟೋಣ ಬಿ)ಕಟ್ಟನು ಸಿ)ಕಟ್ಟಿಯಾನು ಡಿ)ಕಟ್ಟು

**2. 'ಕೈಯಾನು' ಇದು ಈ ಸಮಾಸಕ್ಕೆ ಉದಾಹರಣೆ.**

ಎ)ಕರ್ಮಧಾರೆಯ ಬಿ)ದ್ವಂದ್ವ ಸಿ)ಅಂಶಿ ಡಿ)ಕ್ರಿಯಾ

3. **ಪಾರಿಭಾಷಿಕ ಪದಗಳನ್ನು ಬಳಸುವಾಗ, ಅನ್ಯಭಾಷೆಯ ಪದಗಳನ್ನು ಬಳಸುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ.**

ಎ)ಅಲ್ಪವಿರಾಮ ಬಿ)ವಾಕ್ಯವೇಷ್ಠನ ಸಿ)ಉದ್ಧರಣ ಡಿ)ಆವರಣ

**II. ಕೆಳಗಿನ ಪ್ರಶ್ನೆಗಳಿಗೆ ಮೊದಲೆರೆಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **2*1=2**

5. ಗುರು ಲಘು ಮೊದಲು : ಭ ಯ ಗಣ : : ಗುರು ಲಘು ಮೂರಿರೆ : ___________

6. ಸ್ಥಾನ : ತಾಣ : : ವಂಶ : _____________

**III. ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **4*1=4**

7. ನಾಲ್ವಡಿ ಕೃಷ್ಣರಾಜ ಒಡೆಯರು ಯಾವುದಕ್ಕೆ ಕಂಕಣ ಬದ್ಧರಾಗಿದ್ದರು?

8. ವಚನಕಾರರಿಗೆ ಯಾವುದು ದೇವರಾಗಿತ್ತು ?

9. ದುರ್ಯೋಧನ ಯಾರಿಬ್ಬರನ್ನು ಕೊಂದ ಬಳಿಕ ಸಂಧಿ ಮಾಡಿಕೊಳ್ಳುವುದಾಗಿ ಹೇಳುತ್ತಾನೆ?

10. ಭಗತ್ ಸಿಂಗ್ ಜಲಿಯಾನ್ ವಾಲಾಬಾಗ್‌ನ ಮಣ್ಣಿನ ಕುರಿತು ತನ್ನ ತಂಗಿಗೆ ಏನೆಂದು ಹೇಳುತ್ತಾನೆ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **5*2=10**

11. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಾಡುಗಳಾವುವು ?

12. ಅಶೋಕ ಪೈ ಹೇಳಿದ ಸಂಶೋಧನಾ ಸತ್ಯವೇನು ?

13. ಯುದ್ಧದ ವಿಚಾರದಲ್ಲಿ ಕರ್ಣನ ತೀರ್ಮಾನವೇನು ?

14. ಭಗತ್ ಸಿಂಗ್ ಜಲಿಯಾನ್ ವಾಲಾಬಾಗ್ ಮಾರಣ ಹೋಮದಿಂದ ತೆಗೆದುಕೊಂಡ ನಿರ್ಧಾರವೇನು?

15. ಕ್ರಿಯಾ ಸ್ವಾತಂತ್ರ್ಯ ಎಂದರೇನು?

**V. ಕೆಳಗಿನ ಕವಿ/ಸಾಹಿತಿಗಳ ಕಾಲ, ಸ್ಥಳ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.** **2*3=6**

16. ದೇವನೂರು ಮಹದೇವ.

17. ಕುಮಾರವ್ಯಾಸ.

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗಿಸಿ, ಛಂದಸ್ಸಿನ ಹೆಸರನ್ನು ಬರೆಯಿರಿ.** **1*3=3**

18. ಪಟ್ಟಿದ ನೂರ್ವರುಮೆನ್ನೊಡ

ವುಟ್ಟಿದ ನೂರ್ವರುಮಿದಿರ್ಚೆ ಸತ್ತೊಡೆ ಕೋಪ.

**VII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** **1*3=3**

19. ಮಾತೇ ಮುತ್ತು, ಮಾತೇ ಮೃತ್ಯು.

**ಅಥವಾ**

ಕೈ ಕೆಸರಾದರೆ ಬಾಯಿ ಮೊಸರು.

**VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** **2*3=6**

20. "ಸಾಮಾಜಿಕ ಕಾನೂನಗಳ ಹರಿಕಾರ"

21. "ಮೇಣಾಯ್ತು ಕೌರವಂಗವನಿತಳಂ"

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1*4=4**

22. ಕೊರಳ ಸೆರೆ ಹಿಗ್ಗಿದವು____________

______________________________

______________________________

______________________________

______________________________

________________ಚಿಂತಿಸಿದ

ಅಥವಾ

ಮಾರಿಗೌತಣವಾಯ್ತು____________

______________________________

______________________________

______________________________

______________________________

______________ರಾಜೀವ ಸಖನಾಣೆ

**X. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ.** **1*4=4**

23. ನೆಲಕಿರಿವೆನೆಂದು ಬಗೆದಿರೆ

ಚಲಕಿರಿವೆಂ ಪಾಂಡುಸುತರೊಳೀನೆಲನಿದು ಪಾ

ಲ್ದೆಲನೆನಗೆ ದಿನಪಸುತನಂ

ಕೊಲಿಸಿದ ನೆಲನೊಡನೆ ಮತ್ತೆ ಪುದುವಾಳ್ದಪೆನೆ

**XI. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** **1*5=5**

24. ನಿಮ್ಮನ್ನು ರಾಮನಗರದ ಸರಕಾರಿ ಪ್ರೌಢಶಾಲೆಯ ರಂಜಿತ್ ಎಂದು ಭಾವಿಸಿಕೊಂಡು ಶಾಲೆಯ **ಪೋಷಕರ ಸಭೆಗೆ** ಆಹ್ವಾನಿಸಿ ಮೈಸೂರಿನ ಹೊಳೆನರಸೀಪುರದಲ್ಲಿ ವಾಸಿಸುತ್ತಿರುವ ನಿಮ್ಮ ತಾಯಿ ಶಾರದ ಅವರಿಗೆ ಪತ್ರ ಬರೆಯಿರಿ.

**ಅಥವಾ**

ನಿಮ್ಮ ಬೀದಿಗೆ ದಾರಿದೀಪ ಹಾಕಿಸುವಂತೆ ನೀವು ದಕ್ಷಿಣ ಕನ್ನಡ ಜಿಲ್ಲೆ ಬಂಟ್ವಾಳ ತಾಲೂಕಿನ ಚೆನ್ನೈತ್ತೋಡಿ ಗ್ರಾಮದ ಚಂದ್ರನೆಂದು ಭಾವಿಸಿಕೊಂಡು ಧರ್ಮಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೊಂದು ಪತ್ರ ಬರೆಯಿರಿ.

**************

# ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಬೆಂಗಳೂರು ದಕ್ಷಿಣ (DIET)

## 2024–25ನೇ ಸಾಲಿನ ಎಸ್.ಎಸ್.ಎಲ್.ಸಿ ಸರಣಿ ಪರೀಕ್ಷೆ – 3

**ವಿಷಯ: ಪ್ರಥಮ ಭಾಷೆ ಕನ್ನಡ** **ವಿಷಯ ಸಂಕೇತ: 01K**

**ಸಮಯ: 1ಗಂ. 30 ನಿಮಿಷಗಳು** **ಗರಿಷ್ಠ ಅಂಕಗಳು: 50**

**ವಿದ್ಯಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :**

- ಈ ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿದೆ.
- ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

---

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ. ಕ್ರಮಾಕ್ಷರದೊಂದಿಗೆ ಬರೆಯಿರಿ.** **3×1=3**

**1. 'ನೆಯ್ದುವಸ್ತ್ರ' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ.**

ಎ)ತತ್ಪುರುಷ ಸಮಾಸ ಬಿ)ಅಂಶಿ ಸಮಾಸ ಸಿ)ಕ್ರಿಯಾ ಸಮಾಸ ಡಿ)ಗಮಕ ಸಮಾಸ

**2. 'ಚೆಲುವಿಕೆ' ಎಂಬುದು.**

ಎ)ತದ್ದಿತಾಂತ ಭಾವನಾಮ. ಬಿ)ತದ್ದಿತಾಂತ ನಾಮ. ಸಿ)ತದ್ದಿತಾಂತ ಅವ್ಯಯ ಡಿ) ಕೃದಂತ ಭಾವನಾಮ

**3. 'ವಿದ್ವಾಂಸ' ಎಂಬ ಪದವು.**

ಎ)ರೂಢನಾಮ. ಬಿ)ಅಂಕಿತನಾಮ ಸಿ)ಅನ್ವರ್ಥನಾಮ ಡಿ)ನಿಷೇದಾರ್ಥಕ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೇ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **2×1=2**

4. ದೃಷ್ಟಿ : ದಿಟ್ಟಿ :: ತಪಸ್ವಿ :---------

5. ಸಕ್ಕರೆ : ಸಕ್ಕಾರಿ :: ವಿಶ್ವಾಸ:---------

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **4×1=4**

6. ರಾಹಿಲನು ಯಾರು.?

7. ರಾಮ ಲಕ್ಷ್ಮಣರಿಗೆ ಮತಂಗಾಶ್ರಮಕ್ಕೆ ಹೋಗಲು ಸೂಚಿಸಿದವರು ಯಾರು.?

8. ಕವಿಯು ನೋಡಿದ ಅಡಿಕೆ ತೋಟ ಎಲ್ಲಿದೆ.?

9. ಹಲಗಲಿಯ ನಾಲ್ವರು ಪ್ರಮುಖರು ಯಾರು.?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **5×2=10**

10. ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ ಮೂಡಿದ ಪ್ರಶ್ನೆಗಳೇನು.?

11. ಶಬರಿಯು ರಾಮ ಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ವಿವರಿಸಿ.

12. ಕವಿಯಾತ್ಮವು ಹಸುರುಗಟ್ಟಲು ಕಾರಣವಾದ ಹಿನ್ನೆಲೆಯ ಅಂಶಗಳೇನು.?

13. ಜ್ಞಾನಿ –ಅಜ್ಞಾನಿಗಳ ಸಂಗದ ಬಗೆಗಿನ ಅಕ್ಕಮಹಾದೇವಿಯ ಅಭಿಪ್ರಾಯವೇನು.?

14. ಪೈಗಳ ತಮ್ಮನ ನೂಲು ಮದುವೆ ದಿನ ಅಂಗಳದಲ್ಲಿ ಏನೇನು ಸಿದ್ಧತೆಗಳಾಗುತ್ತಿದ್ದವು.?

**IV. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮ ಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯ ರೂಪದಲ್ಲಿ ಬರೆಯಿರಿ.**

15. ಸಾರಾ ಅಬೂಬಕ್ಕರ್ **1×3=3**

**V. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಿಸಿ.** **1×3=3**

16. ಸಿಡಿಲ ಸಿಡಿದ್ಹಾಂಗ ಗುಂಡು ಸುರಿದಾವ

**VI. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** **1×3=3**

17. ತಾಳಿದವನು ಬಾಳಿಯಾನು

**ಅಥವಾ**

ಮನಸ್ಸಿದ್ದರೆ ಮಾರ್ಗ.

**VII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಸಹಿತ ಸ್ವಾರಸ್ಯಗಳನ್ನು ಬರೆಯಿರಿ.** **3×3=9**

18. ನಾನಾಕೆಯನ್ನು ಪರೀಕ್ಷಿಸುವೆ, ನೀವು ಬಿಸಿನೀರು ಸಿದ್ಧಪಡಿಸಿ".

19. " ಬೆಳಕಿಗೊಲಿದವರು ಉರಿವ ಬತ್ತಿಯ ಕರುಕ ಕಾಣರು"

20. " ಹೊಡೆದರೂ ಗುಂಡ ಕರುಣ ಇಲ್ಲದ್ಹಾಂಗ"

**VIII. ಕೆಳಗಿನ ಪದ್ಯ ಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1×4=4**

21. ಹಸುರಾಗಸ......................................
....................................
....................................
..................... ಬಿಸಿಲು

**ಅಥವಾ**

ಹೊಸ ಹೂವಿನ……………………..
…………………………………….
…………………………………….
...................................ಯುಸಿರೂ!

**IX. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **1×4=4**

22. ಹಲಗಲಿ ದಂಗೆಗೆ ಕಾರಣವೇನು.? ಸರಕಾರ ಅದನ್ನು ಹೇಗೆ ನಿಯಂತ್ರಿಸಿತು.?

**ಅಥವಾ**

ಹಲಗಲಿ ದಂಗೆಯ ಪರಿಣಾಮವೇನು?

**X. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** **1×5=5**

23. ನಿಮ್ಮನ್ನು ಹಾವೇರಿಯ ಸರಕಾರಿ ಪ್ರೌಢಶಾಲೆಯ 'ಸಂಜೀವ' ಎಂದು ಭಾವಿಸಿಕೊಂಡು, ನಿಮಗೆ ಅನಾರೋಗ್ಯದ ನಿಮಿತ್ತ ಎರಡು ದಿನ ರಜೆ ಕೋರಿ ಮುಖ್ಯೋಪಾಧ್ಯಾಯರಿಗೊಂದು ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಹಾಸನದ ಸರ್ಕಾರಿ ಪ್ರೌಢಶಾಲೆಯ 'ಸಂಗೀತ' ಎಂದು ಭಾವಿಸಿಕೊಂಡು, ನಿಮ್ಮ ಅರ್ಧವಾರ್ಷಿಕ ಪರೀಕ್ಷೆ ಸಿದ್ಧತೆಯನ್ನು ಕುರಿತು ಹುಬ್ಬಳ್ಳಿ ನಗರದಲ್ಲಿ ವಾಸವಿರುವ 'ಬಸವರಾಜು' ಎಂಬ ಹೆಸರಿನ ನಿಮ್ಮ ತಂದೆಯವರಿಗೆ ಪತ್ರ ಬರೆಯಿರಿ.

*****************

# ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಬೆಂಗಳೂರು ದಕ್ಷಿಣ (DIET)

**2024–25ನೇ ಸಾಲಿನ ಎಸ್.ಎಸ್.ಎಲ್.ಸಿ ಸರಣಿ ಪರೀಕ್ಷೆ – 4**

**ವಿಷಯ: ಪ್ರಥಮ ಭಾಷೆ ಕನ್ನಡ** **ವಿಷಯ ಸಂಕೇತ: 01K**

**ಸಮಯ: 1ಗಂ. 30 ನಿಮಿಷಗಳು** **ಗರಿಷ್ಠ ಅಂಕಗಳು: 50**

---

**ವಿದ್ಯಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :**

- ಈ ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿದೆ.
- ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

---

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ .ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ. 3x1=3**

**1. ಲೋಕದೊಳ್ – ಪದದಲ್ಲಿರುವ ವಿಭಕ್ತಿಯಿದು**

ಎ) ಪ್ರಥಮಾ ಬಿ)ತೃತೀಯಾ ಸಿ) ಸಪ್ತಮಿ ಡಿ) ದ್ವಿತೀಯಾ

**2. ಬಿಚ್ಚಳಿಸು ಪದದ ಅರ್ಥವಿದು**

ಎ)ಬೀಳಿಸು ಬಿ)ಹೊಗಳು ಸಿ)ಬಿಕ್ಕಳಿಸು ಡಿ)ಎಚ್ಚರಿಸು

3. ʹನೆನಪು ʹ **ಎನ್ನುವುದು ಈ ವ್ಯಾಕರಣಾಂಶದ ಉದಾಹರಣೆಯಾಗಿದೆ**

ಎ)ಕೃದಂತಾವ್ಯಯ ಬಿ)ಕೃದಂತನಾಮ ಸಿ)ತದ್ಧಿತಾಂತ ನಾಮ ಡಿ)ಕೃದಂತ ಭಾವನಾಮ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ. 2x1=2**

4. ಓಡಿದ : ಭೂತ ಕೃದಂತ : : ಬರೆಯದ :-------------

5. ಕಪ್ಪಡಮುಟ್ಟು : ಕ್ರಿಯಾಸಮಾಸ : : ಸಪ್ತವ್ಯಸನಗಳು : ------------

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. 3x1=3**

6. ಕೌಸಂಬಿಯ ಅರಸ ಯಾರು ?

7. ದ್ರೋಣನು ಯಾರೊಡನೆ ಪರಶುರಾಮನ ಬಳಿಗೆ ಬಂದನು ?

8. ಬಿಲ್ಲಹಬ್ಬವನ್ನು ರಚಿಸಿದ ಕವಿ ಯಾರು ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 4x2=8**

9. ವೂಲವರ್ಥ ಅಂಗಡಿಯಲ್ಲಿ ದೊರೆಯುವ ವಸ್ತುಗಳು ಯಾವುವು ?

10. ಸೂರ್ಯಮಿತ್ರನು ಅಗ್ನಿಭೂತಿ ವಾಯುಭೂತಿಯರಿಗೆ ವಿದ್ಯಾಭ್ಯಾಸದ ನಂತರ ಮಾವನೆಂದು ಹೇಳಲು ಕಾರಣವೇನು ?

11. ಪೈಗಳ ಮಗನ ನೂಲಮದುವೆಯ ದಿನ ಅಂಗಳದಲ್ಲಿ ಏನೇನು ಸಿದ್ಧತೆಗಳಾಗುತ್ತಿದ್ದವು ?

12. ಗುರೂಪದೇಶದ ಗುಣಗಳನ್ನು ಬರೆಯಿರಿ.

**V. ಕೆಳಗಿನ ಕವಿ /ಸಾಹಿತಿಯ ಜನ್ಮಸ್ಥಳ ,ಕಾಲ,ಕೃತಿ ಮತ್ತು ಬಿರುದು ಪ್ರಶಸ್ತಿಗಳನ್ನು ಕುರಿತು ವಾಕ್ಯ ರೂಪದಲ್ಲಿ ಬರೆಯಿರಿ. 1x3=3**

13. ವಿ.ಕೃ.ಗೋಕಾಕ

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ ಗಣ ವಿಭಾಗಿಸಿ ಛಂದಸ್ಸಿನ ಹೆಸರು ಬರೆಯಿರಿ. 1x3=3**

14. ಇದು ಚಕ್ರವ್ಯೂಹಮೀವ್ಯೂಹಮನೊಡೆವದಟಂ ಪಾರ್ಥನಂ ತಾತನುಂ ಗೆಂ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿ. 1x3=3**

15. ಆತನು ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದು ಉತ್ತೀರ್ಣನಾದನು. ಬುದ್ಧಿವಂತರಾದ ಮಕ್ಕಳಿಗೆ ಪರೀಕ್ಷೆಯೊಂದು ಲೆಕ್ಕವೇ?

**VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** **3x3=9**

16. "ಮನೆ ಹಿಡಿದು ಇರುವ ತರುಣನ ಬುದ್ಧಿ ಮನೆಯ ಮಟ್ಟದ್ದೇ "

17. " ರಘೂದ್ವಹನ ಸೊಲ್ಗೇಳಿ ನಮಿಸಲ್ ."

18. "ನೊಳವಿಂಗೆ ಕುಪ್ಪೆ ವರಂ ."

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1x4=4**

19. ಉರ್ವಿಯೊಳ್ -----------------------------
------------------------------------------
------------------------------------------
------------------------------------------
------------------------------------------
----------------------------- ಲವನುರಿದೆದ್ದನು

**ಅಥವಾ**

ತೆಗೆದುತ್ತರೀಯಂ --------------------------------
------------------------------------------
------------------------------------------
------------------------------------------
------------------------------------------
---------------------------ಜೇಗೈದು ನಿಂತಿರ್ದನು

**X. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು ,ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** **1x4=4**

20. ಅಱೆಯಿರೆ ನೀಮುಮಾಮುಮೊಡನೋದಿದೆವೆಂಬುದನಣ್ಣ ನಿನ್ನ ನಾ
ನಱಿಯೆನದೆಲ್ಲಿ ಕಂಡೆಯೋ ಮಹೀಪತಿಗಂ ದ್ವಿಜವಂಶಜಂಗಮೇ
ತಱಿ ಕೆಳೆಯಿಂತು ನಾಣಿಲಿಗರಪ್ಪರೆ ಮಾನಸರೆಂಬ ಮಾತುಗಳ್
ನೆಱೆಗೊಳೆ ಕುಂಭಸಂಭವನನಾ ದ್ರುಪದಂ ಕಡುಸಿಗ್ಗು ಮಾಡಿದಂ

**XI. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **1x4=4**

21. ಸಪ್ತವ್ಯಸನಿಗಳಾಗಿದ್ದ ಅಗ್ನಿಭೂತಿ ವಾಯುಭೂತಿಯರು ಪಂಡಿತರಾದುದು ಹೇಗೆ ?

**ಅಥವಾ**

ಸೂರ್ಯಮಿತ್ರನು ತನ್ನ ಮಾವನೆಂದು ತಿಳಿದಾಗ ಅಗ್ನಿಭೂತಿ ವಾಯುಭೂತಿಯರಲ್ಲಿ ಮೂಡಿದ ಭಾವನೆಗಳೇನು ?

**XII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** **1x4=4**

22. ನಿಮ್ಮನ್ನು ಉತ್ತರಕನ್ನಡ ಜಿಲ್ಲೆ ಹೊನ್ನಾವರ ತಾಲೂಕಿನ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಅಭಿಮನ್ಯು ಎಂದು ಭಾವಿಸಿಕೊಂಡು ಶಾಲಾ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ಕೈಗೊಳ್ಳುವಂತೆ ಕೋರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಿಗೆ ಮನವಿ ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಸರ್ಕಾರಿ ಪ್ರೌಢಶಾಲೆ ಹುಲಿಹೈದರದಲ್ಲಿ ಓದುತ್ತಿರುವ 'ಭಾವೇಶ್' ಎಂದು ಭಾವಿಸಿ ನಿಮ್ಮ ಶಾಲೆಯಲ್ಲಿ ಆಚರಿಸಲಿರುವ 'ಮಾತೃವಂದನಾ' ಕಾರ್ಯಕ್ರಮಕ್ಕೆ ಆಹ್ವಾನಿಸಿ ಹಾವೇರಿಯಲ್ಲಿರುವ ನಿಮ್ಮ ತಾಯಿ 'ವಂದನಾ'ಳಿಗೆ ಪತ್ರ ಬರೆಯಿರಿ.

****************